ಕನ್ನಡ ಪೋಸ್ಟ್
KANNADA POST
ಇದು ಸುದ್ದಿ ವಿಲಾಸ
ಕನ್ನಡ ದಿನಪತ್ರಿಕೆ
ಸಂಪಾದಕ : ಮಂಜು ಬನವಾಸೆ
ಹಾಸನ E-mail : kannadapostnews@gmail.com / ಕನ್ನಡ post Price: ₹1
Vol.No.02 | Issue. 09 | Pages. 2 | Date: 03-12-2025, WEDNESDAY RNI NO: KARKAN/2024/89601 Kannada Daily
ಸಂಪುಟ : 02 – ಸಂಚಿಕೆ : 09 – ಪುಟಗಳು : 2 03-12-2025 ಬುಧವಾರ Ph: 8762954248 ದರ : ₹1


# ಹಾನುಬಾಳು ಗ್ರಾ.ಪಂ.ಗೆ ಗಾಂಧಿ ಗ್ರಾಮ ಪುರಸ್ಕಾರ

## ಮಹಿಳಾ ಸ್ನೇಹಿ ಆಡಳಿತಕ್ಕೆ ಒತ್ತು | ಅಧಿಕಾರಿ, ಜನಪ್ರತಿನಿಧಿಗಳ ಒಗ್ಗಟ್ಟಿನ ಫಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹಿಳಾ ಸ್ವಾವಲಂಬಿ, ಸ್ವಚ್ಛತೆ, ಸಮರ್ಪಕ ತ್ಯಾಜ್ಯ ವಿಲೇವಾರಿ, ಡಿಜಿಟಲ್ ಗ್ರಂಥಾಲಯ ಹೀಗೆ ನಾನಾ ಅಭಿವೃದ್ಧಿ ಕಾಮಗಾರಿಗಳ ಪ್ರತಿಫಲ ಎಂಬಂತೆ ಸಕಲೇಶಪುರ ತಾಲ್ಲೂಕಿನ ಹಾನುಬಾಳು ಗ್ರಾಮ ಪಂಚಾಯಿತಿ 2023-24ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಭಾಜನವಾಗಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದ ಹಿನ್ನೆಲೆಯಲ್ಲಿ ಪುರಸ್ಕಾರ ಒಲಿದಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ.ಆರ್.ಸಂತೋಷ್ ಹಾಗೂ ಪಿಡಿಒ ಕೆ.ಹರೀಶ್ ಅವರಿಗೆ ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿದರು.



2024-25ನೇ ಸಾಲಿನಲ್ಲಿ ಗ್ರಾಮ ಪಂಚಾಯತಿಯು ಕಂದಾಯ ವಸೂಲಾತಿಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಿ ಮೆಚ್ಚುಗೆಗೆ ಪಾತ್ರವಾಗಿದೆ. ಗ್ರಾಮ ಸ್ವರಾಜ್ ನಿಯಮಾವಳಿಗಳ ಅನ್ವಯ ಸ್ಥಾಯಿ ಸಮಿತಿ ರಚಿಸಲಾಗಿದೆ. 2024-25ನೇ ಸಾಲಿನಲ್ಲಿ ಪಂಚಾಯಿತಿ ಕಲಿಕಾ ಕೇಂದ್ರವಾಗಿ ಆಯ್ಕೆಯಾಗಿದೆ. ಈ ಯೋಜನೆಯಡಿ 7 ಲಕ್ಷ ರೂ. ಅನುದಾನ ಸರ್ಕಾರದಿಂದ ಲಭ್ಯವಾಗಿದ್ದು ಜೊತೆಗೆ ಸ್ವಂತ ಸಂಪನ್ಮೂಲ ಬಳಸಿ ಅರಿವು ಕೇಂದ್ರ ಮತ್ತು ಗ್ರಾಮ ಪಂಚಾಯಿತಿ ಸಭಾಂಗಣವನ್ನು ಉನ್ನತೀಕರಿಸಲಾಗಿದೆ.


> ಹಾನುಬಾಳು ಗ್ರಾಮ ಪಂಚಾಯಿತಿಗೆ ಗಾಂಧಿ ಗ್ರಾಮ ಸೇರಿ ಅನೇಕ ಪುಸ್ಕಾರಗಳು ಒಲಿದು ಬಂದಿವೆ. ಅದಕ್ಕೆ ಚುನಾಯಿತ ಪ್ರತಿನಿಧಿಗಳು ಹಾಗೂ ಸಿಬ್ಬಂದಿಯ ಶ್ರಮ ಕಾರಣ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಯೋಜನೆಗಳನ್ನು ಅನುಷ್ಠಾನಕ್ಕೆ ಗಾಂಧಿ ಗ್ರಾಮ ಪುರಸ್ಕಾರ ಲಭಿಸಿದೆ.
>
> **– ಕೆ. ಹರೀಶ್, ಗ್ರಾ.ಪಂ. ಪಿಡಿಒ**

### ಡಿಜಿಟಲ್ ಗ್ರಂಥಾಲಯಕ್ಕೆ ಒತ್ತು

ಗ್ರಾಮ ಪಂಚಾಯಿತಿಗಳಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಗ್ರಂಥಾಲಯಗಳನ್ನು ತೆರೆಯಲಾಗಿದೆ. ಇತ್ತೀಚೆಗೆ ಅದನ್ನು ಉನ್ನತೀಕರಿಸಿ ಡಿಜಿಟಲ್ ಗ್ರಂಥಾಲಯವಾಗಿ ಮಾರ್ಪಾಡು ಮಾಡಲಾಗಿದೆ. ಜಿಲ್ಲೆಯ ಪ್ರಥಮ ಡಿಜಿಟಲ್ ಗ್ರಂಥಾಲಯ ಎಂಬ ಹೆಗ್ಗಳಿಕೆಗೆ ಹಾನುಬಾಳು ಗ್ರಾ.ಪಂ. ಪಾತ್ರವಾಗಿದೆ. ಪಂಚಾಯಿತಿಯ ಅರಿವು ಕೇಂದ್ರದಲ್ಲಿ ಒಟ್ಟು 1060 ಜನರು ನೋಂದಣಿಯಾಗಿದ್ದಾರೆ. ಗ್ರಂಥಾಲಯದಲ್ಲಿ 950 ಪುಸ್ತಕಗಳಿವೆ.

### 13 ಸದಸ್ಯರು-9 ಸಿಬ್ಬಂದಿ ಕರ್ತವ್ಯ

ತಾಲೂಕು ಕೇಂದ್ರ ಸಕಲೇಶಪುರದಿಂದ 20 ಕಿ.ಮೀ. ದೂರದಲ್ಲಿ ಹಾನುಬಾಳು ಪಂಚಾಯಿತಿ ಇದೆ. 6925.33 ಚ.ಕಿ.ಮೀ. ಭೌಗೋಳಿಕ ವಿಸ್ತೀರ್ಣ ಹೊಂದಿದ್ದು ಕೃಷಿ ಇಲ್ಲಿನ ಜನರ ಪ್ರಮುಖ ಕಸುಬು. ಒಟ್ಟು 18 ಗ್ರಾಮಗಳಿದ್ದು ಅದರಲ್ಲಿ 8 ಕಂದಾಯ ಮತ್ತು 10 ದಾಖಲೆ ಗ್ರಾಮಗಳಿವೆ. 2011ರ ಜನಗಣತಿ ಪ್ರಕಾರ ಒಟ್ಟು ಜನಸಂಖ್ಯೆ 5291 ಹಾಗು ಸಾಕ್ಷರತೆ ಪ್ರಮಾಣ ಶೇ.94. ವ್ಯಾಪ್ತಿಯಲ್ಲಿ 8 ಕಿರಿಯ ಪ್ರಾಥಮಿಕ ಶಾಲೆ, 2 ಹಿರಿಯ ಪ್ರಾಥಮಿಕ ಶಾಲೆ, 2 ಪ್ರೌಢ ಶಾಲೆಗಳಿವೆ. ಪದವಿ ಪೂರ್ವ ಕಾಲೇಜು 1 ಮತ್ತು 12 ಅಂಗನವಾಡಿ ಕೇಂದ್ರಗಳಿವೆ. ಪ್ರಾಥಮಿಕ ಆರೋಗ್ಯ ಕೇಂದ್ರ, ಪಶು ಆಸ್ಪತ್ರೆ, ಮತ್ತು ಅಂಚೆ ಕಚೇರಿಯನ್ನು ಒಳಗೊಂಡಿದೆ. 13 ಸದಸ್ಯರನ್ನು ಹೊಂದಿರುವ ಗ್ರಾ.ಪಂ.ಗೆ 9 ಜನರು ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ.




ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಉಚಿತ ಇಂಟರ್ ನೆಟ್ ಸೌಲಭ್ಯ ಕಲ್ಪಿಸಲಾಗಿದೆ. ಅರಿವು ಕೇಂದ್ರದ ಮೂಲಕ ಲೀಡ್ ಬ್ಯಾಂಕ್ ಸಹಯೋಗದೊಂದಿಗೆ ಗ್ರಾಮಸ್ಥರಿಗೆ ಆರ್ಥಿಕ ಸಾಕ್ಷರತೆ ಬಗ್ಗೆ ತಿಳವಳಿಕೆ ನೀಡಲಾಗುತ್ತಿದೆ. ಶಾಲಾ ಮಕ್ಕಳಿಗೆ ಒಳಾಂಗಣ ಆಟಗಳು, ರಸಪ್ರಶ್ನೆ, ಪ್ರಬಂಧ ಸ್ಪರ್ಧೆ ನಡೆಸಲಾಗುತ್ತದೆ.

### ಮಹಿಳಾ ಸ್ನೇಹಿ ವಾತಾವರಣ

ಮಹಿಳಾ ಮತ್ತು ಹೆಣ್ಣು ಮಕ್ಕಳ ಸ್ನೇಹಿ ಗ್ರಾಮ ಪಂಚಾಯಿತಿಯಾಗಿಸಲು ಹಲವು ಯೋಜನೆಗಳನ್ನು ಗ್ರಾ.ಪಂ. ಚುನಾಯಿತ ಪ್ರತಿನಿಧಿಗಳು ಹಾಗೂ ಜನಪ್ರತಿನಿಧಿಗಳು ಹಮ್ಮಿಕೊಂಡಿದ್ದಾರೆ.

ಮಹಿಳಾ ಸ್ವಸಹಾಯ ಸಂಘಗಳ ಮೂಲಕ ಸಂಜೀವಿನಿ ಒಕ್ಕೂಟದಿಂದ ಯಶಸ್ವಿ ಕಸ ವಿಂಗಡಣೆ ಮಾಡಲಾಗುತ್ತಿದೆ. 38 ಸಂಜೀವಿನಿ ಸಂಘಗಳಿದ್ದು 30 ಲಕ್ಷ ರೂ. ವರೆಗೆ ಸಾಲ ಸೌಲಭ್ಯ ನೀಡಿ ಸ್ವಾವಲಂಬಿ ಬದುಕಿಗೆ ದಾರಿ ಮಾಡಿಕೊಡಲಾಗಿದೆ.

ತ್ಯಾಜ್ಯ ನಿರ್ವಹಣೆಯಲ್ಲಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರನ್ನು ಬಳಸಿಕೊಂಡು ಕಸ ಸಂಗ್ರಹ ಮಾಡಲಾಗುತ್ತಿದೆ. ಪ್ರಸ್ತುತ ವಾಹನ ಚಾಲಕಿ ಮತ್ತು ಕಸ ವಿಂಗಡಣೆ ಮಾಡುವವರಿಗೆ ಸ್ವಸಹಾಯ ಸಂಘದಿಂದಲೇ ವೇತನ ಪಾವತಿಸಲಾಗುತ್ತಿದೆ.

### ಬಳ್ಳಾರಿಯಿಂದಲೂ ಭೇಟಿ

ತ್ಯಾಜ್ಯ ನಿರ್ವಹಣೆಯಲ್ಲಿ ಗ್ರಾಮ ಪಂಚಾಯಿತಿ ಕೈಗೊಂಡಿರುವ ವಿನೂತನ ಕ್ರಮ ಹಾಗೂ ಮಹಿಳಾ ಪಾಲ್ಗೊಳ್ಳುವಿಕೆಯ ವಿಧಾನ ಅರಿಯಲು ಜಿಲ್ಲೆಯ ಅನೇಕ ಪಂಚಾಯಿತಿಗಳ ಸದಸ್ಯರು ಭೇಟಿ ನೀಡಿದ್ದಾರೆ. ಬಳ್ಳಾರಿ ಜಿಲ್ಲೆ ಓರ್ವಾಯಿ ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು ಮತ್ತು ಸಿಬ್ಬಂದಿ ಘಟಕ ವೀಕ್ಷಿಸಿರುವುದು ವಿಶೇಷ.

2019-20ನೇ ಸಾಲಿನಿಂದ ಸುಮಾರು 170ಕ್ಕೂ ಹೆಚ್ಚು ಸೋಲಾರ್ ಬೀದಿ ದೀಪ ಅಳವಡಿಸಲಾಗಿದೆ. 5ಕ್ಕೂ ಹೆಚ್ಚು ಸೋಲಾರ್ ಹೈಮಾಸ್ಟ್ ಅಳವಡಿಲಾಗಿದೆ. ಅದರಿಂದ ವಿದ್ಯುತ್ ಕಂಬ ಇಲ್ಲದೇ ಇರುವ ಕಡೆ ಬೆಳಕಿನ ವ್ಯವಸ್ಥೆ ಸಾಧ್ಯವಾಗಿದೆ. ವಿದ್ಯುತ್ ವಿಚಾರದ'ಲ್ಲಿ ಪಂಚಾಯಿತಿ ಸ್ವಾವಲಂಬನೆ ಸಾಧಿಸಿದೆ. ಹಾನುಬಾಳು ಪಂಚಾಯಿತಿಗೆ ಈ ಹಿಂದೆ ಬಹಿಲು ಬಹಿರ್ದೆಸೆ ಮುಕ್ತ ಗ್ರಾಮ ಪಂಚಾಯಿತಿ, ಕ್ಷಯ ರೋಗ ಮುಕ್ತ ಪಂಚಾಯಿತಿ ಎಂಬ ಪ್ರಶಸ್ತಿಗಳು ಸಂದಿವೆ.

# ಜಿಲ್ಲಾದ್ಯಂತ ಶ್ರದ್ಧಾ ಭಕ್ತಿಯ ಹನುಮ ಜಯಂತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರ ಸೇರಿ ಜಿಲ್ಲಾದ್ಯಂತ ಮಂಗಳವಾರ ಶ್ರದ್ಧಾ ಭಕ್ತಿಯ ಹನುಮ ಜಯಂತಿ ಆಚರಿಸಲಾಯಿತು.

ಬಹುತೇಕ ಕಡೆ ಮೆರವಣಿಗೆ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ನಗರದ ರೈಲ್ವೆ ನಿಲ್ದಾಣ ಎದುರಿರುವ ಶ್ರೀ ಆಂಜನೇಯ ದೇವಸ್ಥಾನದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಬೆಳಿಗ್ಗೆಯಿಂದ ಸಂಜೆ ವರೆಗೆ ವಿವಿಧ ಸೇವಾ ಕಾರ್ಯಕ್ರಮ ಹಾಗೂ ಮಧ್ಯಾಹ್ನ ಅನ್ನಸಂತರ್ಪಣೆ ಯಶಸ್ವಿಯಾಗಿ ನೆರವೇರಿಸಲಾಯಿತು.

ಬೆಳಿಗ್ಗೆ ಸುಪ್ರಭಾತ ಸೇವೆ, ಅಭಿಷೇಕ, 8 ಗಂಟೆಗೆ ಮಹಾಮಂಗಳಾರತಿ, 9ಕ್ಕೆ ಮಾರುತಿ ಹೋಮ, ಮಧ್ಯಾಹ್ನ 12 ಗಂಟೆಗೆ ಪೂರ್ಣಾಹುತಿ ನಂತರ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನೆರವೇರಿತು. ಮಧ್ಯಾಹ್ನ 12.30ಕ್ಕೆ ಸಾವಿರಾರು ಜನರಿಗೆ ಪ್ರಸಾದ ರೂಪದಲ್ಲಿ ಅನ್ನಸಂತರ್ಪಣೆ ನೆರವೇರಿಸಿದರು. ಸಂಜೆ 7.30ಕ್ಕೆ ಮಾರುತಿ ಉತ್ಸವ ವಿಜೃಂಭಣೆಯಿಂದ ಜರುಗಿತು.

ಅರ್ಚಕ ರಕ್ಷಿತ್ ಭಾರಧ್ವಾಜ್ ಮಾತನಾಡಿ, ಶ್ರೀ ಆಂಜನೇಯ,



ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಈ ವರ್ಷವೂ ಹನುಮ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಇವತ್ತು ಮಾರುತಿಗೆ ವಿಶೇಷ ಅಲಂಕಾರ ಮಾಡಲಾಗಿದೆ. ದೇವಾಲಯದಲ್ಲಿ ಅಲಂಕಾರಕ್ಕೂ ಬಹಳ ಪ್ರಾಮುಖ್ಯತೆ ಕೊಡಲಾಗುತ್ತದೆ ಎಂದರು. ಸಾವಿರಾರು ಜನರಿಗೆ ಪ್ರಸಾದ ರೂಪದಲ್ಲಿ ಅನ್ನಸಂತರ್ಪಣೆ ಮಾಡಲಾಗಿದ್ದು, ಭಗವಂತನು ಎಲ್ಲರಿಗೂ ಒಳಿತು ಮಾಡಲಿ ಎಂದು ಪ್ರಾರ್ಥಿಸಿರುವುದಾಗಿ ಹೇಳಿದರು. ಅಂತೆಯೇ ದೇವಿಗೆರೆ ಬಳಿಯ ನೀರುಬಾಗಿಲು ಆಂಜನೇಯ ದೇವಸ್ಥಾನ ಹಾಗೂ ಜವರಾಯಪಟ್ಟಣದ ದೇವಸ್ಥಾನ ಸೇರಿದಂತೆ ವಿವಿಧ ಭಾಗಗಳಲ್ಲಿ ದೇವರಿಗೆ ವಿಶೇಷ ಪೂಜೆ ಹಾಗೂ ಅನ್ನಸಂತರ್ಪಣೆ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

### ಅರಸೀಕೆರೆಯಲ್ಲಿ ವಿಶೇಷ ಪೂಜೆ

ಹನುಮ ಜಯಂತಿ ಪ್ರಯುಕ್ತ ನಗರ ಸೇರಿದಂತೆ ತಾಲೂಕಿನಾದ್ಯಂತ ಇರುವ ಆಂಜನೇಯ ದೇವಾಲಯಗಳಲ್ಲಿ ವಿಶೇಷ ಪೂಜೆ ನಡೆದವು. ನಗರದ ಪ್ರಾಚೀನ ಆಂಜನೇಯ ದೇವಾಲಯದಲ್ಲಿ ಮುಂಜಾನೆ ಹೆಬ್ಬಾಗಿಲು ಆಂಜನೇಯ ಸ್ವಾಮಿಯ ಮೂಲ ವಿಗ್ರಹಕ್ಕೆ ಕ್ಷೀರಾಭಿಷೇಕ ಸೇರಿ ವಿವಿಧ ಅಭಿಷೇಕ, ಅರ್ಚನೆಗಳು ದೇವಾಲಯದ ಸಂಪ್ರದಾಯದಂತೆ ನಡೆದವು.

ಮುಂಜಾನೆಯಿಂದಲೇ ದೇವಾಲಯಕ್ಕೆ ಆಗಮಿಸಿದ ಭಕ್ತರು ಸರದಿ ಸಾಲಿನಲ್ಲಿ ನಿಂತು ಆಂಜನೇಯ ದರ್ಶನ ಮಾಡಿ ಪೂಜೆ ಸಲ್ಲಿಸುವುದರೊಂದಿಗೆ ಪುನೀತರಾದರು. ಆಂಜನೇಯ ಸ್ವಾಮಿಗೆ ಮಾಡಲಾಗಿದ್ದ ಚರಿ ಹಣ್ಣಿನ ಅಲಂಕಾರ ಭಕ್ತರ ಕಣ್ಮನ ಸೆಳೆಯಿತು. ದೇವಾಲಯದ ಅಭಿವೃದ್ಧಿ ಸಮಿತಿ ವತಿಯಿಂದ ಮಂಗಳಾರತಿ ಬಳಿಕ ಭಕ್ತಾದಿಗಳಿಗೆ ಪುಳಿಯೋಗರೆ ಪ್ರಸಾದ ವಿತರಿಸಲಾಯಿತು. ಮಹಾ ಮಂಗಳಾರತಿ ವೇಳೆ ನಾನಾ ರಾಜಕೀಯ ಪಕ್ಷಗಳ ಮುಖಂಡರು, ಮುಜರಾಯಿ ಇಲಾಖೆ ಅಧಿಕಾರಿಗಳು, ಜನಪರ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಹನುಮ ಜಯಂತಿ ಅಂಗವಾಗಿ ತಾಲೂಕಿನ ಸುಕ್ಷೇತ್ರ, ಮಾಲೇಕಲ್ ಅಮರಗಿರಿ ತಿರುಪತಿಯ ಆಂಜನೇಯಸ್ವಾಮಿ ದೇವಾಲಯ, ಹೆಂಜ ಗೊಂಡನಹಳ್ಳಿ ಆಂಜನೇಯ, ಹಾರನಹಳ್ಳಿ ಹೆಬ್ಬಾಗಿಲು ಆಂಜನೇಯ, ಬಾಣಾವರ ಆಂಜನೇಯ ದೇವಾಲಯ, ಜಾವಗಲ್ ಲಕ್ಷ್ಮಿ ನರಸಿಂಹಸ್ವಾಮಿ ದೇವಾಲಯ, ಗುತ್ತಿನಕೆರೆ ರಂಗನಾಥಸ್ವಾಮಿ ದೇವಾಲಯ ಹೀಗೆ ವೈಷ್ಣವ ದೇವಾಲಯಗಳಲ್ಲೂ ವಿಶೇಷ ಪೂಜೆ ಕೈಂಕರ್ಯ ನಡೆದವು.

# ಹೈನುಗಾರಿಕೆಯಲ್ಲಿ ಮಹಿಳೆಯರ ಪಾತ್ರ ಪ್ರಮುಖ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಹೈನುಗಾರಿಕೆಯಲ್ಲಿ ತೊಡಗಿಕೊಂಡಿರುವ ಮಹಿಳೆಯರು ಆರ್ಥಿಕ ಬದುಕನ್ನು ಸದೃಢವಾಗಿ ಕಟ್ಟಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಹೂವಿನಹಳ್ಳಿ ಗ್ರಾಮದಲ್ಲಿ 12 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿ, ಹೈನುಗಾರಿಕೆಯಲ್ಲಿ ಮಹಿಳೆಯರ ಪಾತ್ರ ಪ್ರಮುಖ ಹಾಗೂ ಕಾರ್ಯವೈಖರಿ ಶ್ಲಾಘನೀಯವಾದುದ್ದು ಎಂದರು.

ಹಾಲು ಹಾಗೂ ಉತ್ಪನ್ನಗಳನ್ನು ಹೊರ ದೇಶಗಳಿಗೂ ಪರಿಚಯಿಸುವ ನಿಟ್ಟಿನಲ್ಲಿ ಕೆಎಂಎಫ್ ಹೊಸ ಹೆಜ್ಜೆ ಇಡುತ್ತಿದ್ದು ಇದರಿಂದ ಹೈನುಗಾರಿಕೆಯು ಪ್ರಬಲ ಕ್ಷೇತ್ರವಾಗಿ ಬೆಳೆಯಲಿದೆ. ಇದರಿಂದ ಹಾಲಿನ ಬೇಡಿಕೆ ಹೆಚ್ಚಾಗಲಿದ್ದು ರೈತರಿಗೂ ಸಾಕಷ್ಟು ಲಾಭ ಸಿಗಲಿದೆ ಎಂದು ತಿಳಿಸಿದರು.



ಹಾಲು ಉತ್ಪಾದಕರ ಸಹಕಾರ ಸಂಘಗಳು ಗ್ರಾಮೀಣ ಭಾಗದ ರೈತ ವರ್ಗದ ಆದಾಯ ಮೂಲವಾಗಿದ್ದು ಆರ್ಥಿಕವಾಗಿ ಮೇಲೆತ್ತುವ ನಿಟ್ಟಿನಲ್ಲಿ ಅದೆಷ್ಟೋ ಕುಟುಂಬಗಳ ಬದುಕಿಗೆ ಆಸರೆಯಾಗುತ್ತಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪುರವರ್ಗ ಹಿರೇಮಠದ ಶ್ರೀ ಮಹೇಶ್ವರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಹಾಲು ಉದ್ಯಮವು ಇಂದು ರೈತರ ಬದುಕಿನ ಸಂಜೀವಿನಿಯಾಗಿದೆ.

ಇದರಿಂದ ಅದೆಷ್ಟೋ ಕುಟುಂಬಗಳು ಸದೃಢವಾಗಿ ಬದುಕು ಕಟ್ಟಿಕೊಂಡು ಸುಂದರ ಜೀವನವನ್ನು ನಡೆಸುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ. ಇದರಿಂದ ಹೈನುಗಾರಿಕೆ ಜೊತೆಗೆ ಸಮಾಜವು ಅಭಿವೃದ್ಧಿಯ ಹಾದಿಯಲ್ಲಿ ಸಾಗುತ್ತಿದೆ ಎಂದು ಆಶೀರ್ವಚನ ನೀಡಿದರು.

ಎಪಿಎಂಸಿ ಮಾಜಿ ಅಧ್ಯಕ್ಷರಾದ ವಳಗೇರಳ್ಳಿ ಮಂಜೇಗೌಡ, ಬಿ.ಆರ್.ದೊರೆಸ್ವಾಮಿ, ತಾಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಜಯರಾವ್, ಬೆಳಗಿಹಳ್ಳಿ ಪುಟ್ಟಸ್ವಾಮಿ, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ನಟರಾಜು, ಗ್ರಾಮ ಪಂಚಾಯಿತಿ ಅಧ್ಯಕ್ಷ ಹೊನ್ನೇಗೌಡ, ಮಾಜಿ ಅಧ್ಯಕ್ಷ ಎಚ್.ಎಂ.ಗೋಪಾಲ್, ಸದಸ್ಯೆ ದ್ರಾಕ್ಷಾಯಿಣಿ ಮಲ್ಲಪ್ಪ, ಸಹಕಾರ ಸಂಘದ ಅಧ್ಯಕ್ಷ ಸಾವಿತ್ರಮ್ಮ, ಪ್ರಮುಖರಾದ ಮೂಡಲಗಿರಿ ಗೌಡ, ಸಂಪತ್ ಕುಮಾರ್, ಬಸವರಾಜ್, ಮಂಜುನಾಥ್, ನಾಗಣ್ಣ ಹಾಗೂ ಉತ್ಪಾದಕರು ಮತ್ತು ಗ್ರಾಮಸ್ಥರು ಇದ್ದರು.

# ಸಾಧನೆಯ ಹಾದಿಯಲ್ಲಿ ಹಾಸನ: ಗಣ್ಯರಿಗೆ ಆಹ್ವಾನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹಾಗೂ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಡಿ.6 ರಂದು ಹಾಸನದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಬರುವಂತೆ ಜಿಲ್ಲಾಡಳಿತದಿಂದ ಮಂಗಳವಾರ ಆಹ್ವಾನಿಸಲಾಯಿತು.

ಕಂದಾಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ, ರಾಜ್ಯ ಗೃಹಮಂಡಳಿ ಅಧ್ಯಕ್ಷ ಹಾಗೂ ಅರಸೀಕೆರೆ ಶಾಸಕ ಕೆ.ಎಂ. ಶಿವಲಿಂಗೇಗೌಡ, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮೊದಲಾದವರು ಖುದ್ದು ಆಮಂತ್ರಣ ನೀಡಿ ಆಹ್ವಾನಿಸಿದರು.

ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಆವರಣದಲ್ಲಿ ಸಾಧನೆಯ ಹಾದಿಯಲ್ಲಿ ಹಾಸನ ಹೆಸರಿನಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹೊಸ ಕಂದಾಯ ಗ್ರಾಮಗಳ ಹಕ್ಕುಪತ್ರ ವಿತರಣೆ ಮತ್ತು ವಿವಿಧ ಅಭಿವೃದ್ಧಿ ಕಾಮಗಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡುವರು. ಅದಕ್ಕಾಗಿ ಜಿಲ್ಲಾಡಳಿತ ಅಗತ್ಯ ಸಿದ್ಧತೆ ಮಾಡಿಕೊಂಡಿದೆ.

ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ. ಗೋಪಾಲಸ್ವಾಮಿ, ಉಪವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಇದ್ದರು.

# ರಾಜ್ಯ ಸರ್ಕಾರದ ವಿರುದ್ಧ ಬೀದಿಗಿಳಿದು ಬಿಜೆಪಿ ಹೋರಾಟ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯ ಕಾಂಗ್ರೆಸ್ ಸರ್ಕಾರ ರೈತ ವಿರೋಧಿ ನೀತಿ ಅನುಸರಿಸುತ್ತಿದೆ, ರೈತರಿಗೆ ಪರಿಹಾರ ನೀಡುವಲ್ಲಿ ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿ ಬಿಜೆಪಿ ಕಾರ್ಯಕರ್ತರು ಮಂಗಳವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಆರ್.ಸಿ. ರಸ್ತೆಯ ಜಿಲ್ಲಾ ಬಿಜೆಪಿ ಕಚೇರಿಯಿಂದ ಎತ್ತಿನ ಗಾಡಿ, ಹಾಲಿನ ಕ್ಯಾನ್ ಹಿಡಿದು ಮೆರವಣಿಗೆ ಹೊರಟ ಪ್ರತಿಭಟನಾಕಾರರು, ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಬಿ.ಎಂ. ರಸ್ತೆ ತಡೆದು, ಮಾನವ ಸರಪಳಿ ನಿರ್ಮಿಸಿ, ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ರಾಜ್ಯದಲ್ಲಿ ಶೇ.58 ರಷ್ಟು ಜನಸಂಖ್ಯೆ ರೈತಾಪಿ ವರ್ಗವಾಗಿದ್ದು, ಶೇ.85 ರೈತರು ಸಣ್ಣ ಹಿಡುವಳಿದಾರರಿದ್ದಾರೆ. ಎರಡೂವರೆ



ವರ್ಷಗಳಿಂದ ಕಾಂಗ್ರೆಸ್ ಸರ್ಕಾರ, ರೈತರ ಪರ ಇದ್ದ ಅನೇಕ ಯೋಜನೆ ಸ್ಥಗಿತಗೊಳಿಸಿದೆ. ಸರ್ಕಾರದ ಅಂಕಿ ಅಂಶ ಪ್ರಕಾರ 14.58 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿ, 10,748 ಕೋಟಿ ನಷ್ಟವಾಗಿದೆ.9 ಜಿಲ್ಲೆಗಳಲ್ಲಿ ಹಾನಿ ಗಂಭೀರವಾಗಿದೆ. ಆದರೆ ಸರ್ಕಾರದಿಂದ ಸೂಕ್ತ ಪರಿಹಾರ ಸಿಕ್ಕಿಲ್ಲ ಎಂದು ದೂರಿದರು. ಪರಿಹಾರ ನೀಡಿದ್ದರೂ, ಅದು ವೈಜ್ಞಾನಿಕವಾಗಿಲ್ಲ. ಇದರಿಂದ ರೈತರ ಬದುಕಿಗೆ ಹೊಡೆತ ಬಿದ್ದಿದೆ. ಸರ್ಕಾರ ಕೂಡಲೇ ಮರು ಸಮೀಕ್ಷೆ ನಡೆಸಿ, ಪರಿಹಾರ ಮೊತ್ತ ಹೆಚ್ಚಿಸಬೇಕು ಎಂದು ರೈತರು ಆಗ್ರಹಿಸಿದರು.

ಉತ್ತರ ಕರ್ನಾಟಕದ ಅನೇಕ ಜಿಲ್ಲೆಗಳಲ್ಲಿ ಕೊಯ್ಲು ಹಂತದಲ್ಲಿ ಸುರಿದ ಭಾರೀ ಮಳೆಯಿಂದ ತೊಗರಿಬೇಳೆ, ಹೆಸರು, ಹತ್ತಿ, ಮೆಕ್ಕೆಜೋಳ ಸೇರಿದಂತೆ ಅನೇಕ ಬೆಳೆ ನಷ್ಟವಾಗಿದೆ. ಪಶ್ಚಿಮಘಟ್ಟ ಮತ್ತು ಕರಾವಳಿ ಜಿಲ್ಲೆಗಳಲ್ಲಿ ಪ್ರಾಣಿ-ಮಾನವ ಸಂಘರ್ಷ, ಕಾಫಿ-ಅಡಕೆ, ಮೆಣಸು, ಏಲಕ್ಕಿ ಬೆಳೆ ಹಾಳಾಗಿದೆ. ಇಷ್ಟಾದರೂ ಎರಡೂವರೆ ವರ್ಷದಿಂದ ಸರ್ಕಾರ ಬದುಕಿಲ್ಲ ಅನ್ನಿಸಿದೆ. ಮೆಕ್ಕೆ ಜೋಳಕ್ಕೆ ಬೆಂಬಲ ಇಲ್ಲ, ಕೃಷಿ ಸಚಿವರು ಪರಿಶೀಲನೆಗೆ ಬಂದಿಲ್ಲ, ಪರಿಹಾರವನ್ನೂ ನೀಡಿಲ್ಲ ಎಂದು ಕಿಡಿ ಕಾರಿದರು. ಯಾವುದೇ ಸರ್ಕಾರ ರೈತರನ್ನು ಎದುರು ಹಾಕಿಕೊಂಡು ಬದುಕಿಲ್ಲ. ಪಿಎಂ ಕಿಸಾನ್ ಸಮ್ಮಾನ್ ಹಣ ಕಡಿತಗೊಳಿಸಲಾಗಿದೆ. 620 ಕೋಟಿ ರೂ.ಗಳನ್ನು ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನವಾಗಿ ನೀಡಬೇಕು. ಇದನ್ನು ನೋಡಿದರೆ ಸರ್ಕಾರ ಯಾರ ಪರ ಇದೆ ಎಂಬ ಅನುಮಾನ ಮೂಡಿದೆ ಎಂದು ಪ್ರಶ್ನಿಸಿದರು.

ಶಾಸಕ ಹೆಚ್.ಕೆ.ಸುರೇಶ್ ಮಾತನಾಡಿ, ಹಾಸನ ಜಿಲ್ಲೆಯಲ್ಲಿ ಆಲೂಗಡ್ಡೆ ನಾಶವಾಯಿತು. ಮೆಕ್ಕೆಜೋಳಕ್ಕೆ ಬಿಳಿಸುಳಿ ರೋಗ ಬಂದು ಅಪಾರ ಪ್ರಮಾಣದ ಬೆಳೆ ಹಾಳಾಗಿದೆ. ಉಳಿದ ಫಸಲು ಖರೀದಿಸಲು ಖರೀದಿ ಕೇಂದ್ರ ತೆರೆಯಬೇಕು. ಜೊತೆಗೆ ಬೆಂಬಲ ಬೆಲೆ ಘೋಷಿಸಬೇಕು. ಸರ್ಕಾರ ಸ್ಪಂದಿಸದಿದ್ದರೆ ಮುಂದೆ ಗ್ರಾಮ ಮಟ್ಟದಲ್ಲೂ ಹೋರಾಟ ಮಾಡಲಾಗುವುದು.

ಚಳಿಗಾಲದ ಅಧಿವೇಶನಕ್ಕೂ ಮುನ್ನ ರೈತರ ಸಮಸ್ಯೆ ಬಗೆಹರಿಸಬೇಕು ಎಂದು ಒತ್ತಾಯಿಸಿದರು.

ಪರಿಹಾರಕ್ಕಾಗಿ ಕಬ್ಬು ಬೆಳೆಗಾರರು ತಿಂಗಳುಗಟ್ಟಲೆ ಹೋರಾಟ ಮಾಡಿದರು. ಇದು ರೈತ ವಿರೋಧಿ ಸರ್ಕಾರ, ಇದರ ವಿರುದ್ಧ ಅಧಿವೇಶನದಲ್ಲಿ ಹೋರಾಟ ಮಾಡುವುದಾಗಿ ತಿಳಿಸಿದರು.

ಪ್ರತಿಭಟನೆಯಲ್ಲಿ ಎಂಎಲ್‌ಸಿ ಡಿ.ಎಸ್.ಅರುಣ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಪ್ರಧಾನ ಕಾರ್ಯದರ್ಶಿಗಳಾದ ಅಮಿತ್ ಶೆಟ್ಟಿ, ಗಿರೀಶ್ ನಂಬೀಹಳ್ಳಿ, ಎಸ್.ಡಿ. ಚಂದ್ರು, ಗಿರೀಶ್, ಬಿ.ಹೆಚ್. ನಾರಾಯಣಗೌಡ, ಪ್ರಸನ್ನಕುಮಾರ್, ವೇದಾವತಿ, ಚನ್ನಕೇಶವ, ಶೋಭನ್ ಬಾಬು, ರಾಜಕುಮಾರ್ ಮೊದಲಾದವರಿದ್ದರು.

